**All India Radio: Bangalore**
**National Bulletin In Kannada**
**14.06.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**14.06.2026 1.10 p.m.**

**<><><><>**

ಮುಖ್ಯಾಂಶಗಳು

1. ಫ್ರಾನ್ಸ್‌ನಲ್ಲಿ ಇಂದು ಪ್ರಧಾನಿ ನರೇಂದ್ರ ಮೋದಿ ಅವರಿಂದ 'ಭಾರತ್ ಇನ್ನೋವೇಟ್ಸ್' ಉದ್ಘಾಟನೆ
2. ಶ್ರೀಲಂಕಾದ ಕೊಲಂಬೊದಲ್ಲಿ ೫ ಸಾವಿರಕ್ಕೂ ಹೆಚ್ಚು ಕಲಾವಿದರಿಂದ ಭರತನಾಟ್ಯ ಪ್ರದರ್ಶನ; ಗಿನ್ನೆಸ್ ವಿಶ್ವ ದಾಖಲೆ ನಿರ್ಮಾಣ
3. ಅಕ್ರಮ ಹಣ ವರ್ಗಾವಣೆ ಪ್ರಕರಣ: ಅಮೆರಿಕ ಮೂಲದ ಸಂಸ್ಥೆ ಸೇರಿ ಆರು ಜನರ ವಿರುದ್ಧ ಬೆಂಗಳೂರಿನಲ್ಲಿ ಪ್ರಕರಣ ದಾಖಲು
4. ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್: ಎ ಗುಂಪಿನ ಪಂದ್ಯದಲ್ಲಿಂದು ಭಾರತ-ಪಾಕಿಸ್ತಾನ ಮುಖಾಮುಖಿ

<><><><>

ಫ್ರಾನ್ಸ್ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರು ನೈಸ್‌ನಲ್ಲಿಂದು ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಅವರೊಂದಿಗೆ 'ಭಾರತ್ ಇನ್ನೋವೇಟ್ಸ್' ವೇದಿಕೆಯನ್ನು ಜಂಟಿಯಾಗಿ ಉದ್ಘಾಟಿಸಲಿದ್ದಾರೆ. ಭಾರತ, ಫ್ರಾನ್ಸ್ ಮತ್ತು ಇತರ ದೇಶಗಳಿಂದ ಉನ್ನತ ನಾವೀನ್ಯತೆ ನವೋದ್ಯಮಗಳು ಮತ್ತು ವೆಂಚರ್ ಕ್ಯಾಪಿಟಲ್ ನಿಧಿಗಳನ್ನು ಒಟ್ಟುಗೂಡಿಸುವ 'ಭಾರತ್ ಇನ್ನೋವೇಟ್ಸ್' ಒಂದು ಪ್ರಮುಖ ವೇದಿಕೆಯಾಗಿದೆ. ಬಳಿಕ ಉಭಯ ನಾಯಕರು, ಪ್ರಮುಖ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ. ಇದೇ ವೇಳೆ ಭಾರತ ಮತ್ತು ಫ್ರಾನ್ಸ್ ನಡುವಿನ ವ್ಯೂಹಾತ್ಮಕ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಕುರಿತು ಮಾತುಕತೆ ನಡೆಸಲಿದ್ದಾರೆ.

<><><><>

ಫ್ರಾನ್ಸ್‌ನಲ್ಲಿ ನಡೆಯಲಿರುವ ಜಿ-೭ ಶೃಂಗಸಭೆಯ ಸಂದರ್ಭದಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಹಲವು ವಿಶ್ವ ನಾಯಕರನ್ನು ಭೇಟಿ ಮಾಡಲಿದ್ದಾರೆ ಎಂದು ಶ್ವೇತಭವನ ತಿಳಿಸಿದೆ. ಈ ಕುರಿತು ಮಾಹಿತಿ

ನೀಡಿದ ಅಮೆರಿಕ ಆಡಳಿತದ ಹಿರಿಯ ಅಧಿಕಾರಿಯೊಬ್ಬರು, ಆರ್ಥಿಕ ಬೆಳವಣಿಗೆ, ಜಾಗತಿಕ ಸರಬರಾಜು ಸರಪಳಿ, ಕೃತಕ ಬುದ್ಧಿಮತ್ತೆ, ಹೂಡಿಕೆ ಸಹಭಾಗಿತ್ವ ಹಾಗೂ ವಿವಿಧ ಜಾಗತಿಕ ಭದ್ರತಾ ಸವಾಲುಗಳು ಮಾತುಕತೆಯ ಪ್ರಮುಖ ವಿಷಯಗಳಾಗಲಿವೆ ಎಂದು ಹೇಳಿದ್ದಾರೆ. ಇದೇ ಬುಧವಾರ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಲಿದ್ದು, ಬಳಿಕ ಜಿ-೭ ರಾಷ್ಟ್ರಗಳ ನಾಯಕರು, ಹಾಗೂ ತಂತ್ರಜ್ಞಾನ ಕ್ಷೇತ್ರದ ಪ್ರಮುಖರೊಂದಿಗೆ ಭೋಜನ ಕೂಟದಲ್ಲಿ ಭಾಗವಹಿಸಲಿದ್ದಾರೆ.

<><><><>

ಕಳೆದ ೧೨ ವರ್ಷಗಳಲ್ಲಿ ಭಾರತ ಗುಣಮಟ್ಟದ ಆರೋಗ್ಯ ಸೇವೆಯನ್ನು ಹೆಚ್ಚು ಕೈಗೆಟಕುವ ಹಾಗೂ ಸುಲಭವಾಗಿ ಲಭ್ಯವಾಗುವಂತೆ ಮಾಡಲು ಶ್ರಮಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಅತ್ಯಂತ ದುರ್ಬಲರಿಗೆ ಉತ್ತಮ ಗುಣಮಟ್ಟದ ಆರೋಗ್ಯ ಸೇವೆಯನ್ನು ಒದಗಿಸುವ ವಿಶ್ವದ ಅತ್ಯಂತ ಅತಿ ದೊಡ್ಡ ಆರೋಗ್ಯ ಕಾರ್ಯಕ್ರಮವಾದ ಆಯುಷ್ಮಾನ್ ಭಾರತ್ ಯೋಜನೆಯನ್ನು ಅನುಷ್ಠಾನಗೊಳಿಸಿರುವ ರಾಷ್ಟ್ರ ಎಂಬುದಕ್ಕೆ ಭಾರತ ಹೆಮ್ಮೆಪಡುತ್ತದೆ ಎಂದರು. ಪ್ರಧಾನಮಂತ್ರಿ ಭಾರತೀಯ ಜನೌಷಧ ಪರಿಯೋಜನಾದಂತಹ ಉಪಕ್ರಮಗಳು ಔಷಧಗಳನ್ನು ಕೈಗೆಟಕುವಂತೆ ಮಾಡಿದೆ. ಪ್ರಮುಖವಾಗಿ ಸ್ಟಂಟ್‌ಗಳು ಮತ್ತು ಮೊಳಕಾಲು ಇಂಪ್ಲಾಂಟ್‌ಗಳ ಬೆಲೆಗಳು ಕೈಗೆಟಕುವಂತಾಗಿವೆ. ಇದು ಅನೇಕ ಜನರಿಗೆ ಸಹಾಯ ಮಾಡಿದೆ ಎಂದು ಅವರು ಹೇಳಿದರು. ವೈದ್ಯಕೀಯ ಶಿಕ್ಷಣದಲ್ಲಿ ಪ್ರಸ್ತುತ ಹೆಚ್ಚಿನ ಸೀಟುಗಳು ಲಭ್ಯವಿರುವುದರಿಂದ ಹೆಚ್ಚಿನ ಸಂಖ್ಯೆ ವಿದ್ಯಾರ್ಥಿಗಳು ಈ ಕ್ಷೇತ್ರಕ್ಕೆ ಪ್ರವೇಶಿಸಬಹುದಾಗಿದೆ. ಆರೋಗ್ಯಕರ ಭಾರತವನ್ನು ನಿರ್ಮಿಸಲು ಕೇಂದ್ರ ಸರ್ಕಾರ ಹಲವು ಉಪಕ್ರಮಗಳನ್ನು ಜಾರಿಗೆ ತಂದಿದ್ದು, ಇದನ್ನು ಮುಂದುವರಿಸಲಾಗುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಕಳೆದ ೧೨ ವರ್ಷದಲ್ಲಿ ಭಾರತದ ಆರೋಗ್ಯ ಕ್ಷೇತ್ರವು ಮಹತ್ವದ ಪರಿವರ್ತನೆಯನ್ನು ಕಂಡಿದ್ದು, ಪ್ರತಿಯೊಬ್ಬ ನಾಗರಿಕನಿಗೂ ಸುಲಭ ಹಾಗೂ ಕೈಗೆಟುಕುವ ಆರೋಗ್ಯ ಸೇವೆಗಳನ್ನು ಒದಗಿಸುವತ್ತ ಸರ್ಕಾರ ವಿಶೇಷ ಒತ್ತು ನೀಡಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಸಚಿವರು, ಸರ್ಕಾರದ ಪ್ರಮುಖ ಆರೋಗ್ಯ ಯೋಜನೆಗಳು ದೇಶದ ಆರೋಗ್ಯ ಮೂಲಸೌಕರ್ಯವನ್ನು ಗಣನೀಯವಾಗಿ ಬಲಪಡಿಸಿದ್ದು, 'ಸ್ವಸ್ಥ ಭಾರತ'ದ

ಪರಿಕಲ್ಪನೆಯನ್ನು ಸಾಕಾರಗೊಳಿಸುವಲ್ಲಿ ಮಹತ್ತರ ಕೊಡುಗೆ ನೀಡಿವೆ ಎಂದು ಅವರು ತಿಳಿಸಿದ್ದಾರೆ. ಇದೇ ವೇಳೆ, ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಕೂಡ ಭಾರತದ ಆರೋಗ್ಯ ಕ್ಷೇತ್ರದಲ್ಲಿನ ಪ್ರಗತಿಯನ್ನು ಶ್ಲಾಘಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಭಾರತ ಇಂದು ವಿಶ್ವದ ಅತಿದೊಡ್ಡ ಆರೋಗ್ಯ ಯೋಜನೆಗಳನ್ನು ಜಾರಿಗೊಳಿಸಿದೆ ಎಂದು ಹೇಳಿದ್ದಾರೆ. ಈ ಪರಿವರ್ತನೆಯ ಮೂಲದಲ್ಲಿ ಮಾನವೀಯ ಕಾಳಜಿ ಅಡಗಿದೆ. ಯಾವುದೇ ಕುಟುಂಬಕ್ಕೆ ವೈದ್ಯಕೀಯ ತುರ್ತು ಪರಿಸ್ಥಿತಿಯು ಆರ್ಥಿಕ ಸಂಕಷ್ಟವಾಗಿ ಪರಿಣಮಿಸಬಾರದು ಎಂಬ ದೂರದೃಷ್ಟಿಯ ಚಿಂತನೆಯೇ ಸರ್ಕಾರದ ಆರೋಗ್ಯ ನೀತಿಗಳ ಆಧಾರವಾಗಿದೆ ಎಂದು ಹೇಳಿದ್ದಾರೆ. ಕೇಂದ್ರ ಸರ್ಕಾರದ ವಿವಿಧ ಆರೋಗ್ಯ ಯೋಜನೆಗಳು ದೇಶದ ಜನರಿಗೆ ಗುಣಮಟ್ಟದ ವೈದ್ಯಕೀಯ ಸೇವೆಗಳನ್ನು ತಲುಪಿಸುವುದರ ಜೊತೆಗೆ ಆರೋಗ್ಯ ವೆಚ್ಚದ ಭಾರವನ್ನು ಕಡಿಮೆ ಮಾಡುವಲ್ಲಿ ಮಹತ್ವದ ಪಾತ್ರ ವಹಿಸುತ್ತಿವೆ ಎಂದು ಪಿಯೂಷ್ ಗೋಯಲ್ ಅಭಿಪ್ರಾಯಪಟ್ಟಿದ್ದಾರೆ.

<><><>

ಶ್ರೀಲಂಕಾದ ರಾಜಧಾನಿ ಕೊಲಂಬೊದಲ್ಲಿ ಇಂದು ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ೫ ಸಾವಿರಕ್ಕೂ ಹೆಚ್ಚು ಭರತನಾಟ್ಯ ಕಲಾವಿದರು ಒಟ್ಟಾಗಿ ಪ್ರದರ್ಶನ ನೀಡಿ, ಗಿನ್ನೆಸ್ ವಿಶ್ವ ದಾಖಲೆ ನಿರ್ಮಿಸಿದ್ದಾರೆ. ಭಾರತದ ಸಂಗಮಂ ಗ್ಲೋಬಲ್ ಅಕಾಡೆಮಿ ಹಾಗೂ ಶ್ರೀಲಂಕಾದ ಸಂಗಮಿಳ್ ಲಿಯಾ ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ಕೊಲಂಬೊದ ಗಾಲ್ ಫೇಸ್ ಗ್ರೀನ್‌ನಲ್ಲಿ ಈ ಕಾರ್ಯಕ್ರಮ ಆಯೋಜಿಸಲಾಗಿತ್ತು. ಭಾರತ, ಶ್ರೀಲಂಕಾ ಸೇರಿದಂತೆ ಹಲವು ದೇಶಗಳ ಸಾವಿರಾರು ನೃತ್ಯ ಕಲಾವಿದರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ, ಭಾರತೀಯ ಶಾಸ್ತ್ರೀಯ ನೃತ್ಯ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಸಂಭ್ರಮಿಸಿದರು. ಭರತನಾಟ್ಯದ ಶಾಶ್ವತ ಪರಂಪರೆಯನ್ನು ಜಗತ್ತಿಗೆ ಪರಿಚಯಿಸುವುದರ ಜೊತೆಗೆ ವಿವಿಧ ದೇಶಗಳ ನಡುವೆ ಸಾಂಸ್ಕೃತಿಕ ಬಾಂಧವ್ಯವನ್ನು ಬಲಪಡಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಆಯೋಜಿಸಲಾಗಿತ್ತು. ಸಾಂಪ್ರದಾಯಿಕ ವರ್ಣರಂಜಿತ ಉಡುಪುಗಳನ್ನು ಧರಿಸಿದ್ದ ಕಲಾವಿದರು, ಗುರುಗಳ ಮಾರ್ಗದರ್ಶನದಲ್ಲಿ ಏಕಕಾಲದಲ್ಲಿ ನೃತ್ಯ ಪ್ರದರ್ಶನ ನೀಡಿ ದಾಖಲೆ ನಿರ್ಮಿಸಿದರು.

<><><>

ದೇಶದ ಎಡಪಂಥೀಯ ಉಗ್ರವಾದ ಪೀಡಿತ ಪ್ರದೇಶಗಳು ಸೇರಿದಂತೆ ವಿದೇಶಿ ಡೆಬಿಟ್ ಕಾರ್ಡ್ ಜಾಲಗಳ ಮೂಲಕ ವಿದೇಶಿ ಹಣವನ್ನು ಅಕ್ರಮವಾಗಿ ಬಳಸಿಕೊಂಡಿರುವ ಆರೋಪದಲ್ಲಿ ಜಾರಿ ನಿರ್ದೇಶನಾಲಯ- ಇಡಿ ನೀಡಿರುವ ದೂರಿನ ಆಧಾರದಲ್ಲಿ ಅಮೆರಿಕ ಮೂಲದ ಸಂಸ್ಥೆ ಮತ್ತು

ಇತರ ಆರು ಜನರ ವಿರುದ್ಧ ಪ್ರಕರಣ ದಾಖಲಾಗಿದೆ. ಇಡಿ ದೂರಿನ ಮೇರೆಗೆ ಬೆಂಗಳೂರಿನ ಕೊತ್ತನೂರು ಪೊಲೀಸರು ಇದೇ ೧೧ ರಂದು ಭಾರತೀಯ ನ್ಯಾಯಸಂಹಿತೆ ಮತ್ತು ಕಾನೂನು ಬಾಹಿರ ಚಟುವಟಿಕೆ ತಡೆಗಟ್ಟುವಿಕೆ ಕಾಯ್ದೆಯಡಿ ಪ್ರರಕಣ ದಾಖಲಿಸಿದ್ದಾರೆ. ಏಪ್ರಿಲ್ ೧೮ ಮತ್ತು ೧೯ ರಂದು ಆದಾಯ ತೆರಿಗೆ ಕಾಯ್ದೆ ಮತ್ತು ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆಯಡಿ ನಡೆಸಿದ ಶೋಧ ಕಾರ್ಯದಲ್ಲಿ ಆರೋಪಿಗಳು ಅಮೆರಿಕ ಮೂಲದ ಸಂಸ್ಥೆಯೊಂದರ ಜೊತೆಗೆ ಸಂಪರ್ಕ ಹೊಂದಿದ್ದು, ಅಕ್ರಮ ಹಣ ವರ್ಗಾವಣೆಗಾಗಿ ಅಮೆರಿಕದ ಬ್ಯಾಂಕ್ ನೀಡಿದ ವಿದೇಶಿ ಮೂಲದ ಡೆಬಿಟ್ ಕಾರ್ಡ್‌ಗಳನ್ನು ಬಳಸಿದ್ದಾರೆ. ೨೦೨೫ರ ನವೆಂಬರ್‌ನಿಂದ ೨೦೨೬ರ ಏಪ್ರಿಲ್ ನಡುವೆ ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆ ಮತ್ತು ವಿದೇಶಿ ಕೊಡುಗೆ ನಿಯಂತ್ರಣ ಕಾಯ್ದೆಯ ನಿಬಂಧನೆಗಳನ್ನು ಉಲ್ಲಂಘಿಸಿ ಸುಮಾರು ೯೨ ಕೋಟಿ ೫೫ ಲಕ್ಷ ರೂಪಾಯಿಗಳನ್ನು ಅಕ್ರಮವಾಗಿ ವರ್ಗಾವಣೆ ಮಾಡಲಾಗಿದೆ ಎಂದು ಇಡಿ ತಿಳಿಸಿದೆ.

<><><><>

ಕೇಂದ್ರ ಸರ್ಕಾರ, ಖ್ಯಾತ ಅರ್ಥಶಾಸ್ತ್ರಜ್ಞ ಪ್ರೊಫೆಸರ್ ಅಲಖ್ ಎನ್. ಶರ್ಮಾ ಅವರನ್ನು ಕಾರ್ಮಿಕ ಅಂಕಿ-ಅಂಶಗಳ ಉನ್ನತ ಮಟ್ಟದ ತಾಂತ್ರಿಕ ತಜ್ಞರ ಸಮಿತಿಯ ಅಧ್ಯಕ್ಷರನ್ನಾಗಿ ನೇಮಿಸಿದೆ. ಕಾರ್ಮಿಕ ಮಾರುಕಟ್ಟೆ ಸೂಚಕಗಳನ್ನು ಬಲಪಡಿಸಲು ಮತ್ತು ನಿಯತಕಾಲಿಕವಾಗಿ ಪರಿಶೀಲಿಸಲು ಮತ್ತು ಭಾರತದ ಕಾರ್ಮಿಕ ಮಾರುಕಟ್ಟೆಯ ವಿಕಸನಗೊಳ್ಳುತ್ತಿರುವ ರಚನೆಯನ್ನು ನಿರ್ಣಯಿಸಲು ಈ ಸಮಿತಿಯನ್ನು ರಚಿಸಲಾಗಿದೆ.

<><><><>

ಇರಾನ್ ಜೊತೆಗಿನ ಯುದ್ಧವನ್ನು ಕೊನೆಗೊಳಿಸುವ ಒಪ್ಪಂದಕ್ಕೆ ಇಂದು ಸಹಿ ಹಾಕಲಾಗುವುದು ಮತ್ತು ಆ ನಂತರ ತಕ್ಷಣವೇ ಹಾರ್ಮುಜ್ ಜಲಸಂಧಿಯನ್ನು ಎಲ್ಲ ದೇಶಗಳಿಗೂ ತೆರೆಯಲಾಗುವುದು ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಇನ್ನೊಂದೆಡೆ, ಒಪ್ಪಂದ ನಿರೀಕ್ಷೆಯಂತೆ ಆಗದಿದ್ದರೆ, ಅಂತಿಮ ಪರ್ಯಾಯ ಮಾರ್ಗದಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ. ಏತನ್ಮಧ್ಯೆ, ಯಾವುದೇ ಒಪ್ಪಂದಕ್ಕೆ ಸಹಿ ಹಾಕುವುದು ತಕ್ಷಣ ನಡೆಯುವ ಸಾಧ್ಯತೆ ಇಲ್ಲ ಎಂದು ಇರಾನ್ ವಿದೇಶಾಂಗ ಸಚಿವಾಲಯದ ವಕ್ತಾರ ಎಸ್ಮಾಯಿಲ್ ಬಘೈ ಹೇಳಿದ್ದಾರೆ. ಒಪ್ಪಂದ ಇಂದು ಆಗುವ ಸಾಧ್ಯತೆಯಿಲ್ಲ ಮತ್ತು ಮುಂಬರುವ ದಿನಗಳಲ್ಲಿ ನಡೆಯಬಹುದು ಎಂದು ಅವರು ಹೇಳಿದ್ದಾರೆ.

<><><><>

ಚಂದ್ರನ ಘನೀಕರಿಸುವ ಹವಾಮಾನದಿಂದ ಚಂದ್ರನ ಲ್ಯಾಂಡರ್ ಅನ್ನು ರಕ್ಷಿಸುವ ಸುಧಾರಿತ ಕೃತಕ ತಾಪನ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಲು ಪರಮಾಣು ಶಕ್ತಿ ಇಲಾಖೆಯೊಂದಿಗೆ ಸಹಯೋಗ ಹೊಂದಿದ್ದೇವೆ ಎಂದು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ಅಧ್ಯಕ್ಷ ವಿ.ನಾರಾಯಣನ್ ತಿಳಿಸಿದ್ದಾರೆ.  ಬೆಂಗಳೂರಿನಲ್ಲಿ ನಡೆದ ಸಿಎಸ್‌ಐಆರ್-ರೈಸ್ ಕಾನ್‌ಕ್ಲೇವ್ ಉದ್ದೇಶಿಸಿ ಮಾತನಾಡಿದ ಇಸ್ರೋ ಮುಖ್ಯಸ್ಥರು, ಸೌರಶಕ್ತಿಯಿಂದ ಇಂಧನ ಪಡೆದ ಚಂದ್ರಯಾನ-೩ ಲ್ಯಾಂಡರ್ ವಿಕ್ರಮ್ ಚಂದ್ರನ ಮೇಲೆ ೧೪ ದಿನಗಳವರೆಗೆ ಮಾತ್ರ ಕಾರ್ಯನಿರ್ವಹಿಸುತ್ತದೆ ಎಂದು ವಿವರಿಸಿದರು. ಇಸ್ರೋ - ಈಗ ಪರಮಾಣು ಶಕ್ತಿ ಇಲಾಖೆಯೊಂದಿಗೆ ಕೆಲಸ ಮಾಡಿ ಚಂದ್ರನ ಮೇಲೆ ೨೦೦ ದಿನಗಳವರೆಗೆ ಇರಬಲ್ಲ ಚಂದ್ರ ಲ್ಯಾಂಡರ್ ಅನ್ನು ಅಭಿವೃದ್ಧಿಪಡಿಸಲಿದೆ.

<><><>

ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್‌ನಲ್ಲಿ, ಭಾರತ ತಂಡ, ಇಂದು ಬರ್ಮಿಂಗ್‌ಹ್ಯಾಮ್‌ನ ಎಡ್ಜ್‌ಬಾಸ್ಟನ್‌ನಲ್ಲಿ ನಡೆಯುವ 'ಎ' ಗುಂಪಿನ ಪಂದ್ಯದಲ್ಲಿ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನದ ವಿರುದ್ಧ ತನ್ನ ಅಭಿಯಾನ ಆರಂಭಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ಭಾರತ ತಂಡ, ಮಹಿಳಾ ಟಿ-೨೦ ಅಂತಾರಾಷ್ಟ್ರೀಯ ಪಂದ್ಯಗಳಲ್ಲಿ ಪಾಕಿಸ್ತಾನದ ವಿರುದ್ಧ ಪ್ರಬಲ ದಾಖಲೆಯನ್ನು ಹೊಂದಿದ್ದು, ಆಡಿದ ೧೬ ಪಂದ್ಯಗಳಲ್ಲಿ ೧೩ ಪಂದ್ಯಗಳನ್ನು ಗೆದ್ದಿದೆ. ಇದಕ್ಕೂ ಮೊದಲು ನಡೆಯುವ ದಿನದ ಮೊದಲ ಪಂದ್ಯದಲ್ಲಿ, ನೆದರ್‌ಲ್ಯಾಂಡ್ಸ್ ತಂಡ, ಬಾಂಗ್ಲಾದೇಶವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಇಂದು ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ.

<><><>

ಅಮೆರಿಕದ ಮ್ಯಾಸಚೂಸೆಟ್ಸ್‌ನ ಜಿಲೆಟ್ ಕ್ರೀಡಾಂಗಣದಲ್ಲಿ ಇಂದು ನಡೆದ ಫಿಫಾ ವಿಶ್ವಕಪ್ ಫುಟ್ಬಾಲ್ ಪಂದ್ಯಾವಳಿಯ ಸಿ ಗುಂಪಿನ ಪಂದ್ಯದಲ್ಲಿ ಸ್ಕಾಟ್ಲೆಂಡ್ ತಂಡ ಹೈಟಿ ತಂಡವನ್ನು ೧-೦ ಗೋಲುಗಳಿಂದ ಪರಾಭವಗೊಳಿಸಿದೆ. ಇನ್ನೊಂದೆಡೆ, ಜರ್ಮನಿ ಮತ್ತು ಕುರಾಕಾವೊ ತಂಡಗಳ ನಡುವೆ ನಡೆಯುವ 'ಇ' ಗುಂಪಿನ ಪಂದ್ಯ ಭಾರತೀಯ ಕಾಲಮಾನ ರಾತ್ರಿ ೧೦:೩೦ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>